433 ಶ್ರೀ ವಸಂತಬಂಗೇರ ಕೆ. (ಬೆಳ್ತಂಗಡಿ): ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಬೆಳ್ತಂಗಡಿ ತಾಲ್ಲೂಕಿನಲ್ಲಿ ಪಡಿತರ ಚೀಟಿ ವಿತರಣೆಯಲ್ಲಿ ಅರ್ಹ ಬಿಪಿಎಲ್ ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ತಾರತಮ್ಯವೆಸಗಿ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇದನ್ನು ಎಷ್ಟು ಅವಧಿಯೊಳಗೆ ಸರಿಪಡಿಸಲಾಗುವುದು?

ಶ್ರೀ ಹೆಚ್. ಹಾಲಪ್ಪ (ಆಹಾರ ಮತ್ತು ನಾಗರಿಕ ಸರಬರಾಜು ಸಚಿವರು):

ಅ) ಯಾವುದೇ ತಾರತಮ್ಯವೆಸಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಮನೆ ಮನೆ ಸಮೀಕ್ಷೆ ಮೂಲಕ ಪಡಿತರ ಚೀಟಿದಾರರನ್ನು ಆಯ್ಕೆ ಮಾಡಿರುವ ಸಂದರ್ಭದಲ್ಲಿ, ಅರ್ಹರು ಬಿಪಿಎಲ್ ಪಡಿತರ ಚೀಟಿ ಪಡೆಯುವುದರಿಂದ ವಂಚಿತರಾಗಿರಬಹುದಾದ ಹಿನ್ನೆಲೆಯಲ್ಲಿ, ತಾತ್ಕಾಲಿಕ ಪಡಿತರ ಚೀಟಿ ವಿತರಣೆಯ ನಂತರ ವರ್ಗ ಬದಲಾವಣೆಗೆ ಅವಕಾಶ ಕಲ್ಪಿಸಲಾಗಿತ್ತು. ಆ ಸಂದರ್ಭದಲ್ಲಿ ಬೆಳ್ತಂಗಡಿ ತಾಲ್ಲೂಕಿನಲ್ಲಿ ಎಪಿಎಲ್ ಪಡಿತರ ಚೀಟಿ ಹೊಂದಿದ 2623 ಕುಟುಂಬಗಳಿಗೆ ಬಿಪಿಎಲ್ ಪಡಿತರ ಚೀಟಿ ವಿತರಿಸಲಾಗಿದೆ. ತದನಂತರವೂ ಅರ್ಹರು ಬಿಪಿಎಲ್‌ನಿಂದ ಕೈಬಿಟ್ಟು ಹೋಗಿದ್ದಲ್ಲಿ ಅಂತಹವರು ನೆಮ್ಮದಿ ಕೇಂದ್ರದ ಮೂಲಕ ಬಿಪಿಎಲ್ ಪಡಿತರ ಚೀಟಿಗೆ ಅರ್ಜಿ ಸಲ್ಲಿಸಲು ಜಿಲ್ಲೆಯಲ್ಲಿ ದಿ: 15.12.2008 ರಿಂದ 31.1.2009ರ ವರೆಗೆ ವಿಶೇಷ ಆಂದೋಲನವನ್ನು ಸರ್ಕಾರವು ಹಮ್ಮಿಕೊಂಡಿರುತ್ತದೆ. ನೆಮ್ಮದಿ ಕೇಂದ್ರದಲ್ಲಿ ಸ್ವೀಕರಿಸಿದ ಅರ್ಜಿಗಳ ಪೈಕಿ ಬೆಳ್ತಂಗಡಿ ತಾಲ್ಲೂಕಿನಲ್ಲಿ 1307 ಕುಟುಂಬಗಳನ್ನು ಬಿಪಿಎಲ್‌ಗೆ ಶಿಫಾರಸ್ಸು ಮಾಡಲಾಗಿದೆ.

ಆ) ನೆಮ್ಮದಿ ಕೇಂದ್ರದ ಮೂಲಕ ಸ್ವೀಕರಿಸಿದ ಅರ್ಜಿಗಳನ್ನು ಪರಿಶೀಲಿಸಿ ಅರ್ಹ ಅರ್ಜಿದಾರರಿಗೆ ಕಾರ್ಡು ವಿತರಿಸುವ ಕಾರ್ಯ ಪ್ರಗತಿಯಲ್ಲಿರುತ್ತದೆ.

434 (ತೋಟಗಾರಿಕೆ ಇಲಾಖೆಯಿಂದ ವರ್ಗಾಹಿತ ಪ್ರಶ್ನೆ) ಶ್ರೀ ವಸಂತ ಬಂಗೇರ ಕೆ. (ಬೆಳ್ತಂಗಡಿ): ಮಾನ್ಯ ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಡಿಕೆಗೆ ಬೆಂಬಲ ಬೆಲೆಯನ್ನು ನೀಡುವ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ;

ಆ) ಹಾಗಿದ್ದಲ್ಲಿ, ನಿಗದಿಪಡಿಸಲಾದ ಬೆಲೆಯೆಷ್ಟು;

ಇ) ರೈತರಿಗೆ ಬೆಂಬಲ ಬೆಲೆ ನಿಗದಿಪಡಿಸಲು ಮಾನದಂಡಗಳೇನು;

ಈ) ಬೆಂಬಲ ಬೆಲೆಯನ್ನು ಯಾವಾಗ ನಿಗದಿಪಡಿಸಲಾಗುವುದು?

ಶ್ರೀ ಶಿವರಾಜ್ ಎಸ್. ತಂಗಡಗಿ (ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು):

ಅ) ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ಕೆಂಪು ಹಾಗೂ ಬಿಳಿ ಪ್ರಬೇದದ ಅಡಿಕೆಗೆ ಬೆಂಬಲ ಬೆಲೆಯನ್ನು ನೀಡುವ ಬಗ್ಗೆ ಪರಿಶೀಲಿಸಿ ಕೆಂಪು ಪ್ರಬೇದದ ಅಡಿಕೆಗೆ ಬೆಂಬಲ ಬೆಲೆ ನೀಡುವ ಬಗ್ಗೆ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಆ) ಎಫ್.ಎ.ಕ್ಯು. ಗುಣಮಟ್ಟದ ಕೆಂಪು ಪ್ರಬೇದದ ಅಡಿಕೆಗೆ ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಬೆಂಬಲ ಬೆಲೆ ಪ್ರತಿ ಕ್ವಿಂಟಾಲ್‌ಗೆ ರೂ. 8,900/–ಕ್ಕೆ ರಾಜ್ಯ ಸರ್ಕಾರವು ಪ್ರತಿ ಕ್ವಿಂಟಾಲ್‌ಗೆ ರೂ. 600/–ರಂತೆ ಪ್ರೋತ್ಸಾಹ ಧನವನ್ನೊಳಗೊಂಡಂತೆ ಒಟ್ಟು ಪ್ರತಿ ಕ್ವಿಂಟಾಲ್‌ಗೆ ರೂ. 9,500/–ರಂತೆ ಬೆಂಬಲ ಬೆಲೆಯನ್ನು ನಿಗದಿಪಡಿಸಲಾಗಿದೆ ಹಾಗೂ ದಿ: 30.6.08ರವರೆಗೆ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿಯಲ್ಲಿ ಕೆಂಪು ಅಡಿಕೆಯನ್ನು ಖರೀದಿಸಲು ಸರ್ಕಾರವು ಆದೇಶಿಸಿರುತ್ತದೆ.